ಶ್ರೀ ಜಯದೇವ ಹೃದ್ರೋಗ ಸಂಸ್ಥೆಯ ಆಸ್ಪತ್ರೆಯನ್ನು ಹೊಸ ಕಟ್ಟಡಕ್ಕೆ ಸ್ಥಳಾಂತರಿಸುವುದು.

214(69)

ಶ್ರೀ ರಾಮಲಿಂಗ ರೆಡ್ಡಿ (ಜಯನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀ ಜಯದೇವ ಹೃದ್ರೋಗ ಸಂಸ್ಥೆಯ ಹೊಸ ಆಸ್ಪತ್ರೆ, ಸಂಕೀರ್ಣ ಬನ್ನೇರುಘಟ್ಟ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಯಿತು: ಈ ಕಾಮಗಾರಿಗೆ ಇಲ್ಲಿಯವರೆಗೆ ಖರ್ಚಾದ ಹಣವೆಷ್ಟು?

ಇ) ಈ ಹೊಸ ಆಸ್ಪತ್ರೆಗೆ ಬೇಕಾಗುವ ವೈದ್ಯಕೀಯ ಉಪಕರಣಗಳು, ಪೀಠೋಪಕರಣಗಳು ಇತ್ಯಾದಿಗಳನ್ನು ಖರೀದಿಸಲಾಗಿದೆಯೇ?

ಈ) ಈ ಆಸ್ಪತ್ರೆಯ ಹೊಸ ಸಂಕೀರ್ಣ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು; ಈ ಹೊಸ ಕಟ್ಟಡಕ್ಕೆ ಮೇಲ್ಕಂಡ ಆಸ್ಪತ್ರೆಯನ್ನು ಯಾವಾಗ ಸ್ಥಳಾಂತರಿಸಲಾಗುವುದು;

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು.

ಆ) ನೂತನ ಶ್ರೀ ಜಯದೇವ ಹೃದ್ರೋಗ ಚಿಕಿತ್ಸಾ ಕೇಂದ್ರದ ಕಟ್ಟಡದ ಕೆಲಸವನ್ನು 1994ರ ಜುಲೈ ತಿಂಗಳಿನಲ್ಲಿ ಪ್ರಾರಂಭಿಸಲಾಗಿದೆ. ಕಟ್ಟಡದ ಅಂದಾಜು ವೆಚ್ಚ ರೂ.43.15 ಕೋಟಿ ಆಗಿದ್ದು ಇಲ್ಲಿಯವರೆಗೆ ರೂ.37.62 ಕೋಟಿ ಹಣವನ್ನು ಖರ್ಚು ಮಾಡಲಾಗಿರುತ್ತದೆ.

ಇ) ವೈದ್ಯಕೀಯ ಉಪಕರಣಗಳನ್ನು ಹಾಗೂ ಪೀಠೋಪಕರಣಗಳು ಇವುಗಳಿಗೆ ಟೆಂಡರುಗಳನ್ನು ಕರೆದಿದ್ದು ಅವುಗಳನ್ನು ಖರೀದಿ ಮಾಡುವ ಹಂತದಲ್ಲಿರುತ್ತದೆ.

ಈ) ವೈದ್ಯಕೀಯ ಉಪಕರಣಗಳು ಇತ್ತೀಚೆಗಷ್ಟೇ ಬಂದಿದ್ದು ವೈದ್ಯಕೀಯ ಉಪಕರಣಗಳನ್ನು ಅಳವಡಿಸುವ ಪ್ರದೇಶಗಳಲ್ಲಿ ಅಂತಿಮ ಹಂತದ ಕೆಲಸಗಳು ನಡೆಯುತ್ತಿದ್ದು ಸಧ್ಯದಲ್ಲೇ ನೂತನ ಕಟ್ಟಡಕ್ಕೆ ಸ್ಥಳಾಂತರಗೊಳ್ಳುವ ಸಂಭವವಿರುತ್ತದೆ.